ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ.ರವರ ನ್ಯಾಯಾಲಯ,
ಮಡಿಕೇರಿ.

**ಸಿ.ಸಿ.ನಂಃ1549/25**

ಪಿಡಬ್ಲ್ಯುಃ – 2

ಸಿಡಬ್ಲ್ಯುಃ – 6

ದಿನಾಂಕಃ 28.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು | – ಚಂದ್ರಶೇಖರ್ |
| ತಂದೆಯ ಹೆಸರು | – ಬಸಪ್ಪ |
| ವಯಸ್ಸು | – 56 ವರ್ಷ |
| ವೃತ್ತಿ | – ಎ ಎಸ್ ಐ, ಆಂತರಿಕ ಭದ್ರತಾ ವಿಭಾಗ, ಮಂಗಳೂರು |
| ವಾಸಸ್ಥಳ | – ಮಂಗಳೂರು |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ–

ನಾನು ದಿಃ 02.11.2024 ರಿಂದ ದಿಃ 01.05.2025 ರವರೆಗೆ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ11.03.2025 ರಂದು ಸಂಜೆ 5.30 ಗಂಟೆ ಸಮಯದಲ್ಲಿ ನಾನು ಠಾಣಾ ಉಸ್ತುವಾರಿಯಲ್ಲಿರುವಾಗ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 46/2025 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮತ್ತು ದೂರನ್ನು ಮೇಲಾಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಮುಂದಿನ ತನಿಖೆಗಾಗಿ ಈ ಪ್ರಕರಣದ ಕಡತವನ್ನು ಚಾಸಾ–7 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ದೂರಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. ಅದನ್ನು ಈಗಾಗಲೇ ನಿಪಿ–1 ಎಂದು ಗುರುತಿಸಲಾಗಿದೆ.

ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಪ್ರ. ವ. ವರದಿಯಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದಾರೆ. ಅದನ್ನು ನಿಪಿ–6 ಎಂದು ಗುರುತಿಸಲಾಯಿತು. ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯ ಸಹಿಯನ್ನು ನಿಪಿ–6(ಎ ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ – ಆರೋಪಿತ ಪರ ವಕೀಲರಾದ ಶ್ರೀ. ಕೆ ಕೆ ಆರ್ ರವರಿಂದಃ–

ಚಾಸಾ–1 ರವರು ಠಾಣೆಗೆ ಬಂದು ದೂರು ನೀಡಿಲ್ಲ, ನಾನು ನಿಪಿ–1ದೂರನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ನಿಪಿ–1 ಹಾಗೂ 6 ದಾಖಲೆಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ – ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/ –

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ. ಎಂ. ಎಫ್. ಸಿ, ಮಡಿಕೇರಿ.